## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Regency Nirman Limited ರವರು ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ನಿಂಬಲಗೆರೆ ಗ್ರಾಮದಲ್ಲಿ 3.2 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: 1578 –R
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ದಿನಾಂಕ: 25.11.2017 ರ ಹಂಚಿಕೆ ಸಮಿತಿ ಸಭೆ ನಡವಳಿಗಳು.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಏಕ ಕಡತ ಪದ್ಧತಿಯಡಿಯಲ್ಲಿ M/s Regency Nirman Limited ರವರು ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ನಿಂಬಲಗೆರೆ ಗ್ರಾಮದಲ್ಲಿ 3.2 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು 3.2 ಮೆ.ವ್ಯಾ ಸಾಮರ್ಥ್ಯಕ್ಕೆ ನಿಗದಿತ ಶುಲ್ಕವನ್ನು ಪಾವತಿಸಿ ಸಲ್ಲಿಸಿದ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, ಸದರಿ ಸ್ಥಳವು ಈಗಾಗಲೇ M/s Vish Wind Infrastructure LLP ರವರಿಗೆ ಹಂಚಿಕೆಯಾಗಿ ರದ್ದುಗೊಂಡಿರುವ ಸ್ಥಳದಲ್ಲಿರುತ್ತದೆ. M/s Regency Nirman Limited ಕಂಪನಿಯ ನೆಟ್‌ವರ್ತ್ ದಿನಾಂಕ: 31.03.2016 ರ ಅಂತ್ಯಕ್ಕೆ ರೂ.247.58 ಕೋಟಿಗಳೆಂದು ಚಾರ್ಟೆಡ್ ಅಂಕೌಂಟೆಂಟ್ ದೃಢೀಕರಣ ಪತ್ರ ಹಾಗೂ ಬ್ಯಾಲೆನ್ಸ್ ಶೀಟ್‌ಗಳನ್ನು ಸಲ್ಲಿಸಿರುವುದಾಗಿ ಹಾಗೂ ಸದರಿ ಕಂಪನಿಯು Registrar of Companies, Ministry of Corporate Affairs, Government of India, Mumbai ಇವರಲ್ಲಿ ದಿನಾಂಕ: 22.03.2007 ರಂದು CIN ಸಂಖ್ಯೆ U45200MH2005PLC153966 ರನ್ವಯ ನೋಂದಣಿಯಾಗಿರುತ್ತದೆ. M/s Regency Nirman Limited ರವರು ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ನಿಂಬಲಗೆರೆ ಗ್ರಾಮದಲ್ಲಿ 3.2 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಸ್ಥಾಪಿಸಲು ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ ಈ ಕೆಳಕಂಡ ಶೆಡ್ಯೂಲ್‌ನಲ್ಲಿರುವಂತೆ ಹಂಚಿಕೆ ಮಾಡಲು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

Geographical area description for 3.20 MW capacity wind power project

| Sl. No | Toposheet No | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 57 B /6 | 3.20 MW (4 Nos x 800 kw) | Nimbalgere village of Kudligi Taluk, Bellary District. | The proposed area to the firm was earlier allotted to M/s Vish Wind Infrastructure LLP for 300 MW. But the firm has transferred 81.60 MW to different firms and balance 218.40 MW is already cancelled.<br><br>Now, the proposal of M/s Regency Nirman Limited, has to install their WTG`s in latitude and longitude mentioned below and without disturbing the wind generation of the already existing machines. |
| | Total | 3.20 MW | | |

Land details for development of 3.20 MW capacity Wind Power Project

| Sl. No | Turbine No | Village | Taluk | District | Capacity in MW | Survey Nos | Latitude | Longitude |
|---|---|---|---|---|---|---|---|---|
| 1 | 580D | Nimbalagere | Kudligi | Bellary | 0.80 | 214/A | 14°42'41.5" | 76°22'25.4" |
| 2 | 575 | Nimbalagere | Kudligi | Bellary | 0.80 | 19/A | 14°42'48" | 76°21'54.1" |
| 3 | 573 | Nimbalagere | Kudligi | Bellary | 0.80 | 429/3 | 14°42'40.8" | 76°21'44.5" |
| 4 | 574B | Nimbalagere | Kudligi | Bellary | 0.80 | 21/B/2 | 14°42'24.2" | 76°21'38.7" |
| **Total** | | | | | **3.20** | | | |

ಮೇಲೆ ಓದಲಾದ ಕ್ರಮ ಸಂಖ್ಯೆ: (2) ದಿನಾಂಕ: 25.11.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ M/s Regency Nirman Limited ರವರು ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ನಿಂಬಲಗೆರೆ ಗ್ರಾಮದಲ್ಲಿ 3.2 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಸಮಿತಿಯು ಸದರಿ ಕಂಪನಿಯವರು ಸ್ಥಾಪಿಸಲು ಉದ್ದೇಶಿಸಿರುವ ಸ್ಥಳವು ಖಾಸಗಿ ಜಮೀನಾಗಿದ್ದು, ಸದರಿ ಸ್ಥಳದಲ್ಲಿ ಪವನ ವಿದ್ಯುತ್ ಯೋಜನೆಯನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ 3.2 ಮೆ.ವ್ಯಾ ಸಾಮರ್ಥ್ಯಕ್ಕೆ ಹಂಚಿಕೆ ನೀಡಲು ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 474 ಎನ್‌ಸಿಇ 2017, ಬೆಂಗಳೂರು, ದಿನಾಂಕ: 22.12.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, M/s Regency Nirman Limited ರವರು ಬಳ್ಳಾರಿ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ನಿಂಬಲಗೆರೆ ಗ್ರಾಮದಲ್ಲಿ 3.2 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

Geographical area description for 3.20 MW capacity wind power project

| Sl. No | Toposheet No | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 57 B /6 | 3.20 MW (4 Nos x 800 kw) | Nimbalgere village of Kudligi Taluk, Bellary District. | The proposed area to the firm was earlier allotted to M/s Vish Wind Infrastructure LLP for 300 MW. But the firm has transferred 81.60 MW to different firms and balance 218.40 MW is already cancelled.<br><br>Now, the proposal of M/s Regency Nirman Limited, has to install their WTG's in latitude and longitude mentioned below and without disturbing the wind generation of the already existing machines. |
| | **Total** | **3.20 MW** | | |

...3)

Land details for development of 3.20 MW capacity Wind Power Project

| Sl. No | Turbine No | Village | Taluk | District | Capacity in MW | Survey Nos | Latitude | Longitude |
|---|---|---|---|---|---|---|---|---|
| 1 | 580D | Nimbalagere | Kudligi | Bellary | 0.80 | 214/A | 14°42'41.5" | 76°22'25.4" |
| 2 | 575 | Nimbalagere | Kudligi | Bellary | 0.80 | 19/A | 14°42'48" | 76°21'54.1" |
| 3 | 573 | Nimbalagere | Kudligi | Bellary | 0.80 | 429/3 | 14°42'40.8" | 76°21'44.5" |
| 4 | 574B | Nimbalagere | Kudligi | Bellary | 0.80 | 21/B/2 | 14°42'24.2" | 76°21'38.7" |
| Total | | | | | 3.20 | | | |

ಷರತ್ತುಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011, ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸ್ಕೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಅನುಷ್ಠಾನಗೊಳಿಸುತ್ತಿದ್ದು, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಕೆ.ಪಿ.ಟಿ.ಸಿ.ಎಲ್ ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಮತ್ತು ಕೆ.ಇ.ಆರ್.ಸಿ ರವರು ಅನುಮೋದಿಸಿ ಚಾಲ್ತಿಯಲ್ಲಿರುವ ದರದಲ್ಲಿ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳೊಂದಿಗೆ ಸರ್ಕಾರದ ಆದೇಶ ಸಂಖ್ಯೆ : ಇಎನ್ 93 ವಿಎಸ್‌ಇ 2017 ದಿನಾಂಕ : 27.10.2017 ರಲ್ಲಿನ ಅಂಶಗಳನ್ನು ಅನುಸರಿಸುವ ಷರತ್ತುಗಳಿಗೊಳಪಟ್ಟು ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

...4)